# ಕರ್ನಾಟಕ ರಾಜ್ಯಪತ್ರ

**ಅಧಿಕೃತವಾಗಿ ಪ್ರಕಟಿಸಲಾದುದು**

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ಎ<br>Part – IVA | ಬೆಂಗಳೂರು, ಗುರುವಾರ, ೨೭, ಜುಲೈ, ೨೦೨೩ (ಶ್ರವಣ, ೦೫, ಶಕವರ್ಷ, ೧೯೪೫)<br>BENGALURU, THURSDAY, 27, JULY, 2023 (SHRAVANA, 05, SHAKAVARSHA, 1945) | ನಂ. ೩೪೧<br>No. 341 |
|---|---|---|


**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 15 ಶಾಸನ 2023, ದಿನಾಂಕ: 27.07.2023**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ, 2023 ಇದಕ್ಕೆ 2023ರ ಜುಲೈ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರ ಅನುಮತಿ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2023 ರ ಕರ್ನಾಟಕ ಅಧಿನಿಯಮ ಸಂಖ್ಯೆ:23 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**2023 ರ ಕರ್ನಾಟಕ ಅಧಿನಿಯಮ ಸಂಖ್ಯೆ: 23**

(2023 ರ ಜುಲೈ ತಿಂಗಳ 27ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2023**

(2023 ರ ಜುಲೈ ತಿಂಗಳ 27ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿ ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2023 ಎಂದು ಕರೆಯತಕ್ಕದ್ದು.

(2) ಇದು 2023ರ ಮಾರ್ಚ್ 29ನೇ ದಿನಾಂಕದಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. 6ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ 29)ರ 6ನೇ ಪ್ರಕರಣದಲ್ಲಿನ ಮೊದಲನೇ ಪರಂತುಕದಲ್ಲಿ "50 ಲಕ್ಷ ರೂಪಾಯಿಗಳಿಗೆ" ಎಂಬ ಪದಗಳು ಮತ್ತು ಅಂಕಿಗಳ ಬದಲಿಗೆ "1.00 ಕೋಟಿ ರೂಪಾಯಿಗಳಿಗೆ" ಎಂಬ ಪದಗಳು ಮತ್ತು ಅಂಕಿಗಳನ್ನು ಪ್ರತಿಯೋಜಿಸತಕ್ಕದ್ದು.

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧ್ಯಾದೇಶ, 2023 (2023ರ ಕರ್ನಾಟಕ ಅಧ್ಯಾದೇಶ ಸಂ. 02)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಅಡಿಯಲ್ಲಿ ಏನೇ ಮಾಡಿದ್ದರೂ ಅಥವಾ ಯಾವುದೇ ಕ್ರಮವನ್ನು ಕೈಗೊಂಡಿದ್ದರೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ.ಶ್ರೀಧರ್**
ಸರ್ಕಾರದ ಕಾರ್ಯದರ್ಶಿ,
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**PARLIAMENTARY AFFAIRS AND LEGISLATION SECRETARIAT**

**NOTIFICATION**

**NO. DPAL 15 SHASANA 2023, BENGALURU, DATED: 27.07.2023**

ಭಾರತ ಸಂವಿಧಾನದ ಅನುಚ್ಛೇಧ 348ರ ಖಂಡ (3)ರ ಅಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2023 (2023ರ ಕರ್ನಾಟಕ ಅಧಿನಿಯಮ ಸಂಖ್ಯೆ: 23) ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ (ಭಾಗ-IV) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

# KARNATAKA ACT NO. 23 OF 2023

(First Published in the Karnataka Gazette Extra-ordinary on the 27th day of July 2023)

## THE KARNATAKA TRANSPARENCY IN PUBLIC PROCUREMENTS (AMENDMENT) ACT, 2023

(Received the assent of the Governor on the 27th day of July, 2023)

An Act further to amend the Karnataka Transparency in Public Procurements Act, 1999.

Whereas it is expedient further to amend the Karnataka Transparency in Public Procurements Act, 1999 (Karnataka Act 29 of 2000) for the purposes hereinafter appearing;

Be it enacted by the Karnataka State Legislature in the Seventy fourth year of the Republic of India as follows:-

**1. Short title and commencement.-** (1) This Act may be called the Karnataka Transparency in Public Procurements (Amendment) Act, 2023.

(2) It shall be deemed to have come into force with effect from 29th day of March 2023.

**2. Amendment of section 6.-** In the Karnataka Transparency in Public Procurements Act, 1999 (Karnataka Act 29 of 2000), in section 6, in the first proviso, for the words and figures "Rs.50.00 Lakhs", the words and figures "Rs.1.00 crore", shall be substituted.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**3. Repeal and savings.-** (1) The Karnataka Transparency in Public Procurements (Amendment) Ordinance, 2023 (Karnataka Ordinance 02 of 2023) is hereby repealed.

(2) Notwithstanding such repeal, anything done or any action taken under the principal Act, as amended by the said Ordinance, shall be deemed to have been done or taken under the principal Act, as amended by this Act.

The above translation of ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2023 (2023 ರ ಕರ್ನಾಟಕ ಅಧಿನಿಯಮ ಸಂಖ್ಯೆ: 23) be published in the official Gazette under clause (3) of Article 348 of the Constitution of India.

**THAAWARCHAND GEHLOT**
**GOVERNOR OF KARANATAKA**

By Order and in the name of
the Governor of Karnataka,

**G.SRIDHAR**
Secretary to Government
Department of Parliamentary
Affairs and Legislation

ಮುದ್ರಕರು ಹಾಗೂ ಪ್ರಕಾಶಕರು- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

S VISWANATH